# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : **342 (396)**
ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ(ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 10.07.2023
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಾಥಮಿಕ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ ಎಷ್ಟು; | • ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 2120 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಖಾಲಿ ಹುದ್ದೆಗಳಿರುತ್ತದೆ.<br>• ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಟ್ಟು 1500 ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳಿರುತ್ತವೆ.<br>• ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. |
| ಆ) | ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br>ಪ್ರಸ್ತುತ 2120 ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿಗೆ ಅನುಮತಿ ನೀಡಲು ಕೋರಿ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>**ಪ್ರೌಢಶಾಲೆಗೆ ಸಂಬಂಧಿಸಿದಂತೆ**<br>ಪ್ರಸ್ತುತ ಖಾಲಿಯಿರುವ ದೈಹಿಕ ಶಿಕ್ಷಕರ ಹುದ್ದೆಗಳ ಪೈಕಿ 200 ದೈಹಿಕ ಶಿಕ್ಷಕರ ಹುದ್ದೆಗಳನ್ನು ಕೇಂದ್ರಿಕೃತ ದಾಖಲಾತಿ ಘಟಕ, ಬೆಂಗಳೂರು (ಸಿಎಸಿ) ಇವರ ಮೂಲಕ ಕ್ರಮವಹಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಇಪಿ 14 ಎಲ್‌ಬಿಪಿ 2022ರಲ್ಲಿ ದಿ:13/09/2022ರಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>**ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**<br>• ಖಾಲಿ ಇರುವ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಲ್ಲಿ 10 ಹುದ್ದೆಗಳನ್ನು ನೇರ ನೇಮಕಾತಿ ವಿಧಾನ ಮೂಲಕ ಭರ್ತಿ ಮಾಡಬೇಕಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಆಯ್ಕೆ ಪ್ರಕ್ರಿಯೆ ನಡೆಸಿ ಆಯ್ಕೆಪಟ್ಟಿಯನ್ನು ನೀಡುವಂತೆ ಕೋರಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕರ ನಿರ್ದೇಶಕರಿಗೆ ಕೋರಲಾಗಿರುತ್ತದೆ.<br>• ಉಳಿದ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಬಡ್ತಿ ವಿಧಾನ ಮೂಲಕ ಭರ್ತಿ ಮಾಡಬೇಕಿದ್ದು, ಈ ಕುರಿತು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ಮಾಹಿತಿ ಕೋರಲಾಗಿದ್ದು, ಮಾಹಿತಿಯನ್ನು ಪಡೆದು ಬಡ್ತಿ ನೀಡುವ ಬಗ್ಗೆ ಕ್ರಮವಹಿಸಲಾಗುವುದು. |

ಸಂಖ್ಯೆ:ಇಪಿ 80 ಎಲ್‌ಬಿಪಿ 2023

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು